ಪಹಣಿ ಹಾಗೂ ಇತರೆ ಸಮಸ್ಯೆಗಳು

4097(4629); ಶ್ರೀ ಬಸವರಾಜ್ ನೀಲಪ್ಪ ಶಿವಣ್ಣನವರ್ (ಬ್ಯಾಡಗಿ)

ಅ) ಕಂದಾಯ ಇಲಾಖೆಯಲ್ಲಿ ನೀಡುವ ಪಹಣಿಗಳನ್ನು ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ರೈತರು ಬಹಳ ವರ್ಷದಿಂದ ಉಳುಮೆ ಮಾಡುತ್ತಿದ್ದ ಕೆಲವೊಂದು ಪಹಣಿ ಮತ್ತು ಪಟ್ಟಾ ವಿತರಣೆಯಾಗದೆ ಉಳಿದಿದ್ದು ರೈತರು ಬಹಳ ವರ್ಷದಿಂದ ಇಂದಿನವರೆಗೂ ಉಳುಮೆ ಮಾಡುತ್ತಿದ್ದು. ಅರಣ್ಯ ಇಲಾಖೆಯವರು ಕೆಲವೊಂದು ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು;

ಇ) ಗ್ರಾಮಗಳಲ್ಲಿ ರೈತರು 5 ಗುಂಟೆ ಒಳಗೆ ಜಮೀನು ಖರೀದಿ ಮಾಡಿಕೊಳ್ಳಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ಶ್ರೀನಿವಾಸ್ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಗ್ರಾಮ ಪಂಚಾಯತಿ ಮಟ್ಟದಲ್ಲಿ ಸಾರ್ವಜನಿಕ ಸೇವಾ ಕೇಂದ್ರಗಳನ್ನು ಇ–ಆಡಳಿತ ಇಲಾಖೆಯಡಿ ಸ್ಥಾಪಿಸುವ ಚಿಂತನೆಯನ್ನು ಸರ್ಕಾರವು ನಡೆಸುತ್ತಿದೆ.

ಈ ಸಾರ್ವಜನಿಕ ಸೇವಾ ಕೇಂದ್ರಗಳನ್ನು ಸ್ಥಾಪಿಸಿದಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿಯೇ ಪಹಣಿಗಳನ್ನು ಲಭ್ಯಪಡಿಸಿ ಪಹಣಿ ವಿತರಿಸುವ ಕಾರ್ಯವನ್ನು ಸರಳೀಕರಣಗೊಳಿಸಲಾಗುವುದು.

ಆ) ರೈತರು ಬಹಳ ವರ್ಷಗಳಿಂದ ಉಳುಮೆ ಮಾಡುತ್ತಿದ್ದ ಜಮೀನುಗಳಿಗೆ ಅಕ್ರಮ ಸಕ್ರಮ ಯೋಜನೆಯಡಿ ಅರ್ಜಿ ಸಲ್ಲಿಸಿದ್ದು. ಸಿ ಮತ್ತು ಡಿ ಮತ್ತು ಡೀಮ್ಡ್ ಫಾರೆಸ್ಟ್ ಎಂದು ನಮೂದಿಸಿದ ಕಾರಣ

ಅರ್ಜಿದಾರರಿಗೆ ಭೂಮಿ ಮಂಜೂರಾತಿ ಮಾಡಿಸಿಕೊಳ್ಳುವಲ್ಲಿ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಡೀಮ್ಡ್ ಫಾರೆಸ್ಟ್ ಜಾಗದಲ್ಲಿ ಇರುವ ಫಲಾನುಭವಿಗಳಿಗೆ ಸಾಗುವಳಿ ಚೀಟಿ ನೀಡುವ ಬಗ್ಗೆ ಜಂಟಿ ಸ್ಥಳ ಪರಿಶೀಲನೆ ನಡೆಸುವ ಬಗ್ಗೆ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಎಫ್ ಎ ಎಫ್ 185/2011 ದಿನಾಂಕ: 15/05/2014 ರಲ್ಲಿ ಸುತ್ತೋಲೆ ಹೊರಡಿಸಿದ್ದು ಕೆಲವು ಜಿಲ್ಲೆಗಳಲ್ಲಿ ಸಭೆ ನಡೆಸಿ ಸರ್ವೆ ನಂಬರ್ ವಾರು ಕಂದಾಯ ಹಾಗೂ ಅರಣ್ಯ ಇಲಾಖೆಯ ಜಂಟಿ ಸಮಿತಿ ರಚಿಸಲಾಗಿದೆ ಇನ್ನು ಕೆಲವು ಜಿಲ್ಲೆಗಳಲ್ಲಿ ಪರಿಶೀಲನೆಯಲ್ಲಿರುತ್ತದೆ.

ಇ) ಜಿಲ್ಲೆಯ ಗ್ರಾಮಗಳಲ್ಲಿ ರೈತರು 05 ಗುಂಟೆ ಒಳಗೆ ಕೃಷಿ ಜಮೀನನ್ನು ಖರೀದಿ ಮಾಡಿಕೊಳ್ಳಲು ಸಂಬಂಧಿಸಿದಂತೆ ಪೂರಕ ದಾಖಲೆಗಳಿದ್ದಲ್ಲಿ ಯಾವುದೇ ತರಹದ ತೊಂದರೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಕೆರೆ ಜೋಡಣೆ ಕಾರ್ಯಕ್ರಮಗಳು

4098(4630); ಶ್ರೀ ಬಸವರಾಜ್ ನೀಲಪ್ಪ ಶಿವಣ್ಣನವರ್

ಅ) ಬ್ಯಾಡಗಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೆರೆ ಜೋಡಣೆ ಕಾರ್ಯ ಅವಶ್ಯಕವಿರುವ ಬಗ್ಗೆ ಪ್ರಸ್ತಾನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು);

ಆ) ಅಂತರ್ಜಲ ಹೆಚ್ಚಿಸಲು ಯಾವ ಯೋಜನೆಯನ್ನು ಜಾರಿಗೊಳಿಸಲಾಗಿದೆ; ಕಳೆದ ಸಾಲಿನಲ್ಲಿ ಈ ಯೋಜನೆಗೆ ನಿಗದಿಗೊಳಿಸಿದ ಅನುದಾನವೆಷ್ಟು; (ವಿವರ ನೀಡುವುದು)?